## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ಪೊಲೀಸ್ ಸಿಬ್ಬಂದಿಗಳ ಕಷ್ಟ ಪರಿಹಾರ ಭತ್ಯೆಯನ್ನು ಪರಿಷ್ಕರಿಸುವ ಹಾಗೂ ವಿಶೇಷ ಭತ್ಯೆಯನ್ನು ಮಂಜೂರು ಮಾಡುವ ಕುರಿತು.**

**ಓದಲಾಗಿದೆ :**

1. ದಿನಾಂಕ: 21-11-2016ರ ಸರ್ಕಾರಿ ಆದೇಶ ಸಂಖ್ಯೆ: ಆಇ 47 ಎಸ್‌ಆರ್‌ಪಿ 2016(II).
2. ದಿನಾಂಕ: 21-11-2016ರ ತಿದ್ದೋಲೆ ಸಂಖ್ಯೆ: ಆಇ 47 ಎಸ್‌ಆರ್‌ಪಿ 2016.
3. ದಿನಾಂಕ: 19-06-2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 6 ಎಸ್‌ಆರ್‌ಪಿ 2019.

**ಪ್ರಸ್ತಾವನೆ :**

ಮೇಲೆ (1)ರಲ್ಲಿ ಓದಲಾದ ದಿನಾಂಕ: 21-11-2016ರ ಸರ್ಕಾರಿ ಆದೇಶದಲ್ಲಿ ಪೊಲೀಸ್ ಇಲಾಖೆಯ ನಿರ್ದಿಷ್ಟ ವೃಂದಗಳಿಗೆ ಕಷ್ಟ ಪರಿಹಾರ ಭತ್ಯೆಯನ್ನು ದಿನಾಂಕ: 01-12-2016ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲಾಗಿತ್ತು. ಮುಂದುವರೆದು, ಮೇಲೆ (3)ರಲ್ಲಿ ಓದಲಾದ ಸಮ ಸಂಖ್ಯೆಯ ದಿನಾಂಕ:19-06-2019ರ ಆದೇಶದಲ್ಲಿ, ಪೊಲೀಸ್ ಇಲಾಖೆಯಲ್ಲಿನ ಪೊಲೀಸ್ ಪೇದೆಯ ವೃಂದಕ್ಕೆ ಮಂಜೂರು ಮಾಡಲಾಗಿದ್ದ ಕಷ್ಟ ಪರಿಹಾರ ಭತ್ಯೆಯನ್ನು ಪುನ: ರೂ.1000/-ಗಳಿಗೆ ಹೆಚ್ಚಳ ಮಾಡಲಾಗಿರುತ್ತದೆ.

ಬದಲಾದ ಸನ್ನಿವೇಶ ಸಂದರ್ಭಗಳಲ್ಲಿ ಪೊಲೀಸ್ ಇಲಾಖೆಯ ಕಾರ್ಯಾಚರಣೆ ಮಟ್ಟದ ಪೊಲೀಸ್ ಸಿಬ್ಬಂದಿಗಳು ಎದುರಿಸುತ್ತಿರುವ ತೊಂದರೆಗಳನ್ನು ಸರ್ಕಾರವು ಗಮನಿಸಿರುತ್ತದೆ. ಆದುದರಿಂದ, ನಿರ್ದಿಷ್ಟ ವೃಂದಗಳಿಗೆ ಲಭ್ಯವಿದ್ದ ಕಷ್ಟ ಪರಿಹಾರ ಭತ್ಯೆಯನ್ನು ಪರಿಷ್ಕರಿಸಲು ಮತ್ತು ಒಂದು ವೃಂದಕ್ಕೆ ವಿಶೇಷ ಭತ್ಯೆಯನ್ನು ಮಂಜೂರು ಮಾಡುವುದು ಅವಶ್ಯವೆಂದು ಸರ್ಕಾರವು ಪರಿಗಣಿಸಿದೆ. ಅದರಂತೆ, ಈ ಕೆಳಕಂಡ ಆದೇಶಗಳನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಆಇ 6 ಎಸ್‌ಆರ್‌ಪಿ 2019**
**ಬೆಂಗಳೂರು, ದಿನಾಂಕ: 18ನೇ ಅಕ್ಟೋಬರ್ 2019**

ಪೊಲೀಸ್ ಇಲಾಖೆಯಲ್ಲಿನ ಈ ಕೆಳಕಂಡ ವೃಂದಗಳಿಗೆ ಲಭ್ಯವಿದ್ದ ಕಷ್ಟ ಪರಿಹಾರ ಭತ್ಯೆಯನ್ನು ಆ ವೃಂದಗಳ ಎದುರಿಗೆ ನಮೂದಿಸಿರುವ ದರಗಳಲ್ಲಿ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ:

| ಕ್ರ ಸಂ. | ಹುದ್ದೆ / ವೃಂದ | ಮಾಸಿಕ ಕಷ್ಟ ಪರಿಹಾರ ಭತ್ಯೆಯ ಪ್ರಸ್ತುತ ದರ (ರೂ.) | ಮಾಸಿಕ ಕಷ್ಟ ಪರಿಹಾರ ಭತ್ಯೆಯ ಪರಿಷ್ಕೃತ ದರ (ರೂ.) |
|---|---|---|---|
| 1 | ಅನುಯಾಯಿ/ಜಮೇದಾರ್ ಅನುಯಾಯಿ | 1000 | 2000 |
| 2 | ಪೊಲೀಸ್ ಪೇದೆ | 2000 | 3000 |
| 3 | ಮುಖ್ಯ ಪೇದೆ | 1000 | 2000 |
| 4 | ಸಹಾಯಕ ಸಬ್-ಇನ್ಸ್‌ಪೆಕ್ಟರ್ | 1000 | 2000 |
| 5 | ಪೊಲೀಸ್ ಸಬ್-ಇನ್ಸ್‌ಪೆಕ್ಟರ್ | 1000 | 2000 |

2. ಪೊಲೀಸ್ ಇನ್ಸ್‌ಪೆಕ್ಟರ್ ವೃಂದಕ್ಕೆ ಮಾಸಿಕ ರೂ.1000/-ಗಳ ವಿಶೇಷ ಭತ್ಯೆಯನ್ನು ಮುಂದಿನ ವೇತನ ಶ್ರೇಣಿಗಳ ಪರಿಷ್ಕರಣೆಯವರೆಗೆ ಮಂಜೂರು ಮಾಡಲೂ ಸಹ ಸರ್ಕಾರವು ಹರ್ಷಿಸುತ್ತದೆ.

3. ಈ ಆದೇಶದನ್ವಯ ಮಂಜೂರು ಮಾಡಲಾದ ಕಷ್ಟ ಪರಿಹಾರ ಭತ್ಯೆ/ ವಿಶೇಷ ಭತ್ಯೆಯು ನಿಯೋಜನೆ ಮೇಲೆ ತೆರಳುವ ಮತ್ತು ನಿಯೋಜನೆ ಭತ್ಯೆ ಅಥವಾ ಸಂಬಂಧಿತ ಇಲಾಖೆ/ಸಂಸ್ಥೆಯ ಹುದ್ದೆಗಳಿಗೆ ಅನ್ವಯಿಸುವ ವಿಶೇಷ ಭತ್ಯೆಯನ್ನು ಪಡೆಯುತ್ತಿರುವವರಿಗೆ ಅನ್ವಯಿಸುವುದಿಲ್ಲ.

4. ಕಷ್ಟ ಪರಿಹಾರ ಭತ್ಯೆಯನ್ನು ಮುಂದಿನ ವೇತನ ಪರಿಷ್ಕರಣೆ ಅಥವಾ ಮುಂದಿನ ಆದೇಶಗಳವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆವಿಗೆ ಪಾವತಿಸತಕ್ಕದ್ದು.

5. ವಿಶೇಷ ಭತ್ಯೆ ಸಕ್ರಮಗೊಳಿಸುವ ಕುರಿತು ಚಾಲ್ತಿಯಲ್ಲಿರುವ ಎಲ್ಲಾ ನಿಯಮಗಳು/ಆದೇಶಗಳು ಈ ಆದೇಶದನ್ವಯ ಮಂಜೂರು ಮಾಡಲಾದ ಭತ್ಯೆಗಳಿಗೆ ಅನ್ವಯಿಸುತ್ತದೆ.

6. ಈ ಆದೇಶಗಳು ದಿನಾಂಕ: 01-11-2019ರಿಂದ ಜಾರಿಗೆ ಬರುತ್ತವೆ.

7. ಪೊಲೀಸ್ ಸಿಬ್ಬಂದಿಗಳಿಗೆ ಕಷ್ಟ ಪರಿಹಾರ ಭತ್ಯೆಯನ್ನು ಮಂಜೂರು ಮಾಡಿ ಹೊರಡಿಸಿರುವ ಹಿಂದಿನ ಎಲ್ಲಾ ಆದೇಶಗಳನ್ನು ನಿರಸನಗೊಳಿಸಿ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಸ್. ಜೋಗೋಜಿ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ(ಸೇವೆಗಳು-2).

BHR 18/10/19

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಘನತೆವೆತ್ತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು-1
4. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ,(ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ,(ಪಿ.ಬಿ. ನಂ.5398) ಬೆಂಗಳೂರು.
6. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.

7. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು
9. ಡೈರೆಕ್ಟರ್ ಜನರಲ್ & ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ನೃಪತುಂಗ ರೋಡ್, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
11. ಪೊಲೀಸ್ ಆಯುಕ್ತರು, ಬೆಂಗಳೂರು ನಗರ.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು.
14. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
15. ಎಲ್ಲಾ ಜಿಲ್ಲೆಗಳ ಸೂಪರಿಂಟೆಂಡೆಂಟ್ ಆಫ್ ಪೊಲೀಸ್
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
20. ವಾರಪತ್ರ/ಶಾಖೆಯ ರಕ್ಷಾ ಕಡತ.

**Official Website of Finance Department, GOK: www.finance.karnataka.gov.in**